# ಕರ್ನಾಟಕ ಸರ್ಕಾರದ ನಡವಳಿ

ವಿಷಯ : ರಾಜ್ಯ ಸರ್ಕಾರಿ ನೌಕರರ ಮನೆ ಬಾಡಿಗೆ ಭತ್ಯೆ ದರಗಳ ಪರಿಷ್ಕರಣೆ ಕುರಿತು.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 19 ಎಸ್‌ಆರ್‌ಪಿ 99 ದಿನಾಂಕ 10-8-1999
2. ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 14 ಎಸ್‌ಆರ್‌ಪಿ 2002 ದಿನಾಂಕ 12-4-2002
3. ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 8 ಎಸ್‌ಆರ್‌ಪಿ 2007 ದಿನಾಂಕ 16-5-2007
4. ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 01 ಎಸ್‌ಆರ್‌ಪಿ 2009 ದಿನಾಂಕ 2-3-2009

ಪ್ರಸ್ತಾವನೆ :

ರಾಜ್ಯ ಸರ್ಕಾರವು ರಾಜ್ಯ ಸರ್ಕಾರಿ ನೌಕರರಿಗೆ ನೀಡುತ್ತಿರುವ ಮನೆ ಬಾಡಿಗೆ ಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ ಪರಿಶೀಲಿಸಿದ್ದು, ಈ ಕೆಳಕಂಡ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ ಸಂಖ್ಯೆ ಎಫ್‌ಡಿ 29 ಎಸ್‌ಆರ್‌ಪಿ 2010 ದಿನಾಂಕ 28-10-2010

ಸರ್ಕಾರವು ಈ ಕೆಳಗೆ ಸೂಚಿಸಿರುವ ನಗರಗಳು ಮತ್ತು ಪಟ್ಟಣಗಳಲ್ಲಿ ಕಾರ್ಯ ನಿರ್ವಹಿಸುವ ರಾಜ್ಯ ಸರ್ಕಾರಿ ನೌಕರರ ಮನೆ ಬಾಡಿಗೆ ಭತ್ಯೆ ದರಗಳನ್ನು ದಿನಾಂಕ 1 ನೇ ಜನವರಿ 2010 ರಿಂದ ಜಾರಿಗೆ ಬರುವಂತೆ ಈ ಕೆಳಗಿನಂತೆ ಪರಿಷ್ಕರಿಸಿ ಆದೇಶಿಸಲು ಹರ್ಷಿಸುತ್ತದೆ.

| ನಗರ / ಪಟ್ಟಣಗಳ ವರ್ಗೀಕರಣ | ಮನೆ ಬಾಡಿಗೆ ಭತ್ಯೆಯ ಪರಿಷ್ಕೃತ ದರಗಳು |
|---|---|
| ಎ | ಮೂಲ ವೇತನದ ಶೇಕಡ 25 % ರಷ್ಟು |
| ಬಿ-1<br>ಬಿ-2 | ಮೂಲ ವೇತನದ ಶೇಕಡ 16 % ರಷ್ಟು |
| ಸಿ | ಮೂಲ ವೇತನದ ಶೇಕಡ 10 % ರಷ್ಟು |
| ಖ | ಮೂಲ ವೇತನದ ಶೇಕಡ 7 % ರಷ್ಟು |
| ಇ | ಮೂಲ ವೇತನದ ಶೇಕಡ 6 % ರಷ್ಟು |

2. ಈ ಆದೇಶಗಳು, ಕರ್ನಾಟಕ ನಾಗರೀಕ ಸೇವಾ ನಿಯಮಗಳ ಉಪಭಂಧಗಳ ವ್ಯಾಪ್ತಿಯೊಳಗೆ ಬರುವ ಪೂರ್ಣಕಾಲಿಕ ಮತ್ತು ಕಾಲಿಕ ವೇತನ ಶ್ರೇಣಿಯಲ್ಲಿನ ಎಲ್ಲಾ ಸರ್ಕಾರಿ ನೌಕರರಿಗೂ ಅನ್ವಯವಾಗುತ್ತದೆ.

3. ಈ ನಿಯಮಗಳನ್ನು (i) ಕಾಲಿಕ ವೇತನ ಶ್ರೇಣಿಯಲ್ಲಿರುವ ವರ್ಕ್‌ಚಾರ್ಜ್ಡ್ ನೌಕರರು (ii) ಕಾಲಿಕ ವೇತನ ಶ್ರೇಣಿಯಲ್ಲಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳ ಪೂರ್ಣಕಾಲಿಕ ನೌಕರರು ಮತ್ತು ವಿಶ್ವವಿದ್ಯಾನಿಲಯಗಳ ಬೋಧಕೇತರ ಸಿಬ್ಬಂದಿ (iii) ಯುಜಿಸಿ / ಎಐಸಿಟಿಇ / ಐಸಿಎಆರ್ ವೇತನ ಶ್ರೇಣಿಯಲ್ಲಿ ವೇತನ ಪಡೆಯುವ ವಿಶ್ವವಿದ್ಯಾನಿಲಯಗಳ, ಎಂಜಿನಿಯರಿಂಗ್ ಕಾಲೇಜುಗಳ ಸಿಬ್ಬಂದಿಗೆ ಮತ್ತು (iv) ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳಿಗೆ ಅನ್ವಯವಾಗುವಂತೆ ವಿಸ್ತರಿಸಲಾಗಿದೆ.

4. ಮನೆ ಬಾಡಿಗೆ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
ಸಹಿ:
( ಕೆ.ಎಸ್.ಗೋಪಾಲಕೃಷ್ಣ )
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಕರ್ನಾಟಕ ಸರ್ಕಾರ

ಸಂಖ್ಯೆ ಎಫ್‌ಡಿ 29 ಎಸ್‌ಆರ್‌ಪಿ 2010

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ 28-10-2010

**ತಿದ್ದೋಲೆ**

ವಿಷಯ : ರಾಜ್ಯ ಸರ್ಕಾರಿ ನೌಕರರ ಮನೆ ಬಾಡಿಗೆ ಭತ್ಯೆ ದರಗಳ ಪರಿಷ್ಕರಣೆ ಕುರಿತು.

----

ದಿನಾಂಕ 28-10-2010ರ ಸಂಖ್ಯೆ ಎಫ್‌ಡಿ 29 ಎಸ್‌ಆರ್‌ಪಿ 2010 ರ ಸರ್ಕಾರಿ ಆದೇಶದ, ಆದೇಶದ ಭಾಗದಲ್ಲಿನ " ದಿನಾಂಕ 1 ನೇ ಜನವರಿ 2010 " ಎಂಬುದರ ಬದಲಿಗೆ " ದಿನಾಂಕ 1-11-2010" ಎಂದು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸಹಿ:
( ಕೆ.ಎಸ್.ಗೋಪಾಲಕೃಷ್ಣ )
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

------------------------------

ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಸಂಖ್ಯೆ ಹನಿಅ/ವಿಭಾಗ-2/ಮನೆ ಬಾಡಿಗೆ ಭತ್ಯೆ/2010-11

ದಿನಾಂಕ 2-11-2010

:::: ಸುತ್ತೋಲೆ - 21 ::::

ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಮನೆ ಬಾಡಿಗೆ ಭತ್ಯೆ ಮಂಜೂರಾತಿ ಬಗ್ಗೆ.

ಉಲ್ಲೇಖ : 1. ಈ ಕಛೇರಿಯ ಟಿಪ್ಪಣಿ ಸಂಖ್ಯೆ ಹನಿಅ/ವಿಭಾಗ-2/ಮನೆ ಬಾಡಿಗೆ ಭತ್ಯೆ/2010-11 ದಿನಾಂಕ 29-10-2010

2. ಕುಲಪತಿಗಳ ಅನುಮೋದನೆ ದಿನಾಂಕ 30-10-2010

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಅದೇಶ ಸಂಖ್ಯೆ ಎಫ್‌ಡಿ 29 ಎಸ್‌ಆರ್‌ಪಿ 2010 ದಿನಾಂಕ 28-10-2010 ಮತ್ತು ಸರ್ಕಾರದ ತಿದ್ದೋಲೆ ದಿನಾಂಕ 28-10-2010 ರಲ್ಲಿ ಮಂಜೂರು ಮಾಡಿರುವ ಮನೆ ಬಾಡಿಗೆ ಭತ್ಯೆಯ ದರವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರಿಗೆ ದಿನಾಂಕ 1-11-2010 ರಿಂದ ಜಾರಿಗೆ ಬರುವಂತೆ ಯಥಾವತ್ತಾಗಿ ವಿಸ್ತರಿಸಲಾಗಿದೆ.

ಹಣಕಾಸು ನಿಯಂತ್ರಣಾಧಿಕಾರಿಗಳು

ಪ್ರತಿ :

1. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಅಧಿಕಾರಿಗಳಿಗೆ
2. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ
3. ಉಪ ಹಣಕಾಸು ನಿಯಂತ್ರಣಾಧಿಕಾರಿಗಳು / ಸಹಾಯಕ ಹಣಕಾಸು ನಿಯಂತ್ರಣಾಧಿಕಾರಿಗಳು, ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ, ಜಿಕೆವಿಕೆ.